# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 21
2. ಸದಸ್ಯರ ಹೆಸರು : ಶ್ರೀ ಕೆ. ಹರೀಶ್ ಕುಮಾರ್
3. ಉತ್ತರಿಸುವ ದಿನಾಂಕ : 04.07.2023
4. ಉತ್ತರಿಸುವ ಸಚಿವರು : ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕಳೆದ ಮೂರು ವರ್ಷಗಳ ಹಿಂದೆ ರಾಜ್ಯ ಸರ್ಕಾರಕ್ಕೆ ಕೋಟ್ಯಾಂತರ ರೂಪಾಯಿ ಆದಾಯ ತಂದುಕೊಡುತ್ತಿದ್ದ ಎ.ಪಿ.ಎಂ.ಸಿ ಗಳು ಈಗ ಕಛೇರಿ ವಿದ್ಯುತ್ ಮತ್ತು ನೀರಿನ ಶುಲ್ಕ ಪಾವತಿಸಲಾಗದೇ ಶೋಚನೀಯ ಸ್ಥಿತಿ ತಲುಪುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | - ಬಂದಿದೆ - |
| (ಆ) | ಹಿಂದಿನ ರಾಜ್ಯ ಸರ್ಕಾರ ಜಾರಿಗೊಳಿಸಿದ ಎ.ಪಿ.ಎಂ.ಸಿ 2020 ತಿದ್ದುಪಡಿ ಕಾಯ್ದೆಯ ಬಳಿಕ ರಾಜ್ಯ 162 ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದು, ಈ ನಿಟ್ಟಿನಲ್ಲಿ ಸರ್ಕಾರವು ಸದರಿ ಕಾಯ್ದೆಯನ್ನು ಮಾರ್ಪಡಿಸಿ ಹಿಂದಿನಂತೆ ಎ.ಪಿ.ಎಂ.ಸಿ ಗಳನ್ನು ಬಲಪಡಿಸುವ ನಿಟ್ಟಿನಲ್ಲಿ ಕ್ರಮವಹಿಸುವುದೇ? (ವಿವರ ಒದಗಿಸುವುದು) | ರಾಜ್ಯ ಸರ್ಕಾರವು ಮಾರುಕಟ್ಟೆ ಪ್ರಾಂಗಣಗಳ ಹೊರಗಡೆ ಮಾರುಕಟ್ಟೆ ಕ್ಷೇತ್ರದಲ್ಲಿ ನಡೆಯುವ ವ್ಯಾಪಾರ ವಹಿವಾಟಿನ ಮೇಲೆ ಈ ಮೊದಲಿನಂತೆ ನಿಯಂತ್ರಣವನ್ನು ಹೊಂದುವುದು ರೈತ ಬೆಳೆಗಾರರ ಹಿತದೃಷ್ಟಿಯಿಂದ ಅವಶ್ಯಕತೆ ಇರುವುದನ್ನು ಪರಿಗಣಿಸಿ, ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ 1966ರ ಕಲಂ 8(2), ಕಲಂ 8(3) ಹಾಗೂ ಕಲಂ 117ಕ್ಕೆ ತಿದ್ದುಪಡಿ ಮಾಡಿ ಪುನರ್ ಸ್ಥಾಪಿಸಲು ದಿನಾಂಕ:15.06.2023 ರಂದು ಸಚಿವ ಸಂಪುಟದ ಅನುಮೋದನೆ ದೊರೆತಿರುತ್ತದೆ. |

ಸಂಖ್ಯೆ: ಸಿಒ 113 ಎಂಆರ್‌ಇ 2023

(ಶಿವಾನಂದ ಎಸ್. ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು